ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 24–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾ ಗೋಷ್ಠಿ:<br>ಹೆಚ್.ಆಂಜನೇಯ<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | 25–12–2014<br>ಬೆಳಗ್ಗೆ<br>11–00 ಗಂಟೆಗೆ | ಡಿ. ದೇವರಾಜ ಅರಸು ಭವನ<br>ಮಿಲ್ಲರ್ ಟ್ಯಾಂಕ್ ಬಂಡ್ ರಸ್ತೆ<br>ಬೆಂಗಳೂರು |

## ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಗ್ರಾಹಕರ ಜಿಲ್ಲಾ ಮಾಹಿತಿ ಕೇಂದ್ರ

**:–ದಿನೇಶ್ ಗುಂಡೂರಾವ್**

**ಬೆಂಗಳೂರು:ಡಿಸೆಂಬರ್:24:(ಕರ್ನಾಟಕ ವಾರ್ತೆ):–**

ಮುಂದಿನ ವರ್ಷದೊಳಗೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಗ್ರಾಹಕರ ಜಿಲ್ಲಾ ಮಾಹಿತಿ ಕೇಂದ್ರವನ್ನು ಸ್ಥಾಪಿಸಲಾಗುವುದೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ಕಬ್ಬನ್ ಉದ್ಯಾನವನದಲ್ಲಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಏರ್ಪಡಿಸಿದ್ದ, ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಉದ್ಘಾಟಿಸಿ ಮಾತಾನಾಡಿದ ಸಚಿವರು, ರಾಜ್ಯದ ನಾಲ್ಕು ಜಿಲ್ಲೆಗಳಾದ ಬಳ್ಳಾರಿ, ಶಿವಮೊಗ್ಗ, ದಕ್ಷಿಣ ಕನ್ನಡ, ಹಾಗೂ ಉಡುಪಿಯಲ್ಲಿ ಮಾತ್ರ ಜಿಲ್ಲಾ ಮಾಹಿತಿ ಕೇಂದ್ರಗಳನ್ನು ತೆರೆಯಲಾಗಿದೆ. ಉಳಿದ ಜಿಲ್ಲೆಗಳ ಗ್ರಾಹಕರು ತಮಗೆ ಬೇಕಾದ ಮಾಹಿತಿಗಳನ್ನು ಪಡೆದುಕೊಳ್ಳಲು ಸಾಧ್ಯವಾಗದನ್ನು ಮನಗಂಡಿರುವ ಇಲಾಖೆಯು ಮುಂದಿನ ವರ್ಷದೊಳಗೆ ಎಲ್ಲಾ ಜಿಲ್ಲೆಗಳಲ್ಲೂ ಸಹಾಯವಾಣಿಯ ರೀತಿಯಲ್ಲಿ ಸ್ನೇಹದಿಂದ ವ್ಯವಹರಿಸುವಂತಹ ಜಿಲ್ಲಾ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲಾಗುವುದೆಂದರು.

ಅದೇ ರೀತಿಯಲ್ಲಿ ಎಲ್ಲಾ ಜಿಲ್ಲೆಗಳಲ್ಲಿರುವ ವ್ಯಾಜ್ಯಗಳ ಪರಿಹಾರ ವೇದಿಕೆಗಳಿಗೆ ಸದಸ್ಯರನ್ನು ನೇಮಕ ಮಾಡುವ ವಿಚಾರವು ಹೈ ಕೋರ್ಟ್‌ನಲ್ಲಿದೆ. ನ್ಯಾಯಾಲಯದಿಂದ ತೀರ್ಪು ಹೊರಬಂದ ಕೂಡಲೇ ಸದಸ್ಯರನ್ನು ನೇಮಕಮಾಡಲಾಗುವುದು. 20 ಲಕ್ಷ ರೂ ಗಳ ಮೊತ್ತದ ವರೆಗಿನ ವ್ಯಾಜ್ಯಗಳನ್ನು ಗ್ರಾಹಕರು ಜಿಲ್ಲಾ ವ್ಯಾಜ್ಯಗಳ ಪರಿಹಾರ ವೇದಿಕೆಗಳಲ್ಲಿ, 20 ಲಕ್ಷ ರೂ ಗಳಿಂದ 1 ಕೋಟಿ ರೂಗಳ ಮೊತ್ತದ ವರೆಗಿನ ವ್ಯಾಜ್ಯಗಳನ್ನು ರಾಜ್ಯ ವ್ಯಾಜ್ಯಗಳ ಪರಿಹಾರ ವೇದಿಕೆಗಳಲ್ಲಿ ಹಾಗೂ 1 ಕೋಟಿಗೂ ಹೆಚ್ಚಿನ ಮೊತ್ತದ ವರೆಗಿನ ವ್ಯಾಜ್ಯಗಳನ್ನು ಕೇಂದ್ರ ವ್ಯಾಜ್ಯಗಳ ಪರಿಹಾರ ವೇದಿಕೆಗಳಲ್ಲಿ ಕೇಸನ್ನು ದಾಖಲಿಸುವ ಮೂಲಕ ಗ್ರಾಹಕರು ಪರಿಹಾರವನ್ನು ಪಡೆದುಕೊಳ್ಳಬಹುದೆಂದರು.

ಗ್ರಾಹಕರ ವ್ಯವಹಾರ ನಿರ್ವಹಣೆಯನ್ನು ಇಲಾಖೆಯ ಆಯುಕ್ತರೇ ನೋಡಿಕೊಳ್ಳುತ್ತಿದ್ದಾರೆ. ಇಲಾಖೆಯ ಬಹುದೊಡ್ಡದಾದ ಅನ್ನ ಭಾಗ್ಯ ಯೋಜನೆಯ ಕಾರ್ಯಕ್ರಮವನ್ನು ನೋಡಿಕೊಳ್ಳಬೇಕಾಗಿರುವುದರಿಂದ ಗ್ರಾಹಕರ ವ್ಯವಹಾರ ನಿರ್ವಹಣೆಗಾಗಿಯೇ ಒಬ್ಬ ನಿರ್ದೇಶಕರನ್ನು ನೇಮಕ ಮಾಡಿ ಅವರಿಗೆ ಪೂರ್ತಿ ಜವಾಬ್ದಾರಿಯನ್ನು ನೀಡಲು ತೀರ್ಮಾನಿಸಲಾಗಿದ್ದು, ಸರ್ಕಾರಕ್ಕೆ ಈ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಗ್ರಾಹಕರು ಜಾಗೃತರಾಗಿ ತಮ್ಮ ಹಕ್ಕನ್ನು ಒತ್ತಾಯ ಮಾಡುವಂತಹ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಲು ಗ್ರಾಹಕರ ಸೇವೆಯಲ್ಲಿ ತೊಡಗಿರುವ ಸ್ವಯಂ ಸೇವಾ ಸಂಸ್ಥೆಗಳನ್ನು ತೊಡಗಿಸಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಗ್ರಾಹಕ ವ್ಯವಹಾರಗಳ ಬಗ್ಗೆ ಜಾಗೃತಿಯನ್ನು ಮೂಡಿಸಲು ಪ್ರಸಕ್ತ ಸಾಲಿನಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದೆಂದರು.

ಕಾರ್ಯಕ್ರಮದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಸಾರ್ವಜನಿಕರ ಸೇವೆಗೆ ಹತ್ತಿರವಾಗಿಸುವ ನಿಟ್ಟಿನಲ್ಲಿ ಮೂರು ವಿಭಾಗಗಳನ್ನಾಗಿ ಮಾಡುವ ಬಗ್ಗೆ ಇನ್ನೂ ಯಾವುದೇ ನಿಶ್ಚಿತ ತೀರ್ಮಾನವಾಗಿಲ್ಲ. ಸಾರ್ವಜನಿಕರಿಗೆ ಇದರಿಂದ ಅನುಕೂಲವಾಗುವುದಾದರೆ ಕಂಡಿತವಾಗಿಯೂ ತಮ್ಮ ಒಪ್ಪಿಗೆ ಇದೆ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎಸ್. ಇಂದ್ರಕಲಾ ಅವರು ಮಾತನಾಡಿ ಗ್ರಾಹಕರ ಹಕ್ಕುಗಳ ಕಾಯ್ದೆ ಇರುವುದೇ ಸಮಾಜದ ಸುವ್ಯವಸ್ಥೆಯನ್ನು ಕಾಪಾಡುವುದಕ್ಕಾಗಿ. ನೊಂದ ಗ್ರಾಹಕರಿಗೆ ಪರಿಹಾರವನ್ನು ಒದಗಿಸಿಕೊಡುವ ಜೊತೆಗೆ ತಪ್ಪನ್ನು ಎಸಗುವವರು ಮತ್ತೆ ಆ ರೀತಿಯ ತಪ್ಪನ್ನು ಮಾಡದಂತೆ ಮಾಡುವುದೇ ಈ ಕಾನೂನಿನ ಉದೇಶವಾಗಿದೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರಾದ ಎಸ್.ಎಂ.ಆನಂದ್ ಅವರು ಗ್ರಾಹಕರ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಉಪಾಧ್ಯಕ್ಷರಾದ ಮೋಹನ್ ವಿ. ಅಸುಂಡಿ ಅವರು ಶಾಲಾ ಗ್ರಾಹಕರ ಸದಸ್ಯರಿಗೆ ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಾನೂನು ಮಾಪನಶಾಸ್ತ್ರ ಇಲಾಖೆ , ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ಆಹಾರ, ಮತ್ತು ನಾಗರಿಕ ಸರಬರಾಜು ನಿಗಮ ಮತ್ತು ಮೈಸೂರ್ ಸ್ಯಾಂಡಲ್ ಸೋಪ್ ವತಿಯಿಂದ ಗ್ರಾಹಕರಲ್ಲಿ ಅರಿವು ಮೂಡಿಸುವಂತಹ ವಸ್ತುಪ್ರದರ್ಶನವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಆಹಾರ, ನಾಗರಿಕ ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಪಿ. ರವಿಕುಮಾರ್, ಆಯುಕ್ತರಾದ ಎಸ್.ಎಸ್.ಪಟ್ಟಣಶೆಟ್ಟಿ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕಾದ ಕೆ.ಪಿ.ಮೋಹನ್ ರಾಜ್, ಕಾನೂನು ಮಾಪನಶಾಸ್ತ್ರ ಇಲಾಖೆಯ ನಿಯಂತ್ರಕರಾ ಎಸ್. ಆರ್. ವೆಂಕಟೇಶ್ ಉಪಸ್ಥಿತರಿದ್ದರು.

ಬಿ.ಜಿ.ಪಿ:ಪಹೊ.

## ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 4 ನೇ ಘಟಿಕೋತ್ಸವ

**ಬೆಂಗಳೂರು:ಡಿಸೆಂಬರ್:24:(ಕರ್ನಾಟಕ ವಾರ್ತೆ):-**

ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 4 ನೇ ಘಟಿಕೋತ್ಸವವನ್ನು ಜನವರಿ 22 ರಂದು ಬೆಳಗ್ಗೆ 11 ಗಂಟೆಗೆ ತೋಟಗಾರಿಕೆ ವಿ.ವಿ.ಯ ಉದ್ಯಾನಗಿರಿಯಲ್ಲಿರುವ ಪ್ರೇಕ್ಷಾಗೃಹದಲ್ಲಿ ಏರ್ಪಡಿಲಾಗಿದೆ ಎಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕದ ಘನವೆತ್ತ ರಾಜ್ಯಪಾಲರಾದ ವಜುಭಾಯಿ ವಾಲಾ ಅವರು ಘಟಿಕೋತ್ಸವದ ಅಧ್ಯಕ್ಷತೆ ವಹಿಸುವರು. ತೋಟಗಾರಿಕೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಡಾ. ಶಾಮನೂರು ಶಿವಶಂಕರಪ್ಪ, ಮೈಸೂರಿನ ಜಗದ್ಗುರು ಶ್ರೀ ಶಿವರಾತ್ರಿಶ್ವರ ಸೆಂಟರ್ ಫಾರ್ ಮ್ಯಾನೇಜಮೆಂಟ್ ಸ್ಟಡೀಜ್‌ನ ನಿರ್ದೇಶಕರಾದ ಡಾ.ವಿ.ಪ್ರಕಾಶ್ ಅವರು ಸೇರಿದಂತೆ ವಿಶ್ವವಿದ್ಯಾಲಯದ ಉಪಕುಲಾಧಿಪತಿಗಳು ಘಟಿಕೋತ್ಸವದಲ್ಲಿ ಉಪಸ್ಥಿತರಿರುವರು.

ಪದವಿಯನ್ನು ಪಡೆಯುವ ವಿದ್ಯಾರ್ಥಿಗಳು ಜನವರಿ 21 ರಂದು ಸಾಯಂಕಾಲ 4 ಗಂಟೆಗೆ ಪ್ರೇಕ್ಷಾಗೃಹದಲ್ಲಿ ನೆಡೆಯಲಿರುವ ರಿಹರಸಲ್‌ನಲ್ಲಿ ತಪ್ಪದೆ ಭಾಗವಿಸುವಂತೆ ಕುಲಸಚಿವರು ತಿಳಿಸಿದ್ದಾರೆ.

ಬಿ.ಜಿ.ಪಿ:ಪಹೊ.

## ಕನ್ನಡ ಪುಸ್ತಕ ಸೊಗಸು -2013 ಬಹುಮಾನಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:ಡಿಸೆಂಬರ್:24:(ಕರ್ನಾಟಕ ವಾರ್ತೆ):-**

**ಕನ್ನಡ ಪುಸ್ತಕ ಪ್ರಾಧಿಕಾರವು ಜನವರಿ 2013 ರಿಂದ ಡಿಸೆಂಬರ್ 2013 ರ ಅವಧಿಯಲ್ಲಿ** ಪ್ರಕಟವಾದ ಕನ್ನಡದ ಕೃತಿಗಳಿಗೆ ಪ್ರಕಾಶಕರಿಂದ 2013 ನೇ ಸಾಲಿನ "ಕನ್ನಡ ಪುಸ್ತಕ ಸೊಗಸು" ಬಹುಮಾನಕ್ಕೆ ಅರ್ಜಿ ಆಹ್ವಾನಿಸಿದೆ. ಕೃತಿಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ಬಹುಮಾನವನ್ನು ನೀಡಲಾಗುವುದು.

ಆಸಕ್ತರು ಪುಸ್ತಕದ ಹೆಸರು, ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು ಹಾಗೂ ಪೂರ್ಣ ವಿಳಾಸದೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ಜನವರಿ 7 ರೊಳಗೆ ಆಡಳಿತಾಧಿಕಾರಿಗಳು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್ www.kannadapustakapradhikara.com ಹಾಗೂ ದೂರವಾಣಿ ಸಂಖ್ಯೆ 080-22484516 ಅಥವಾ 22107704 ಅನ್ನು ಸಂಪರ್ಕಿಸ ಬಹುದಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿ.ಜಿ.ಪಿ:ಪಹೊ.

**ಡಿಸೆಂಬರ್ 27 ರಿಂದ ನಗರದಲ್ಲಿ 22 ನೇ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶ**

**ಬೆಂಗಳೂರು:ಡಿಸೆಂಬರ್:24:(ಕರ್ನಾಟಕ ವಾರ್ತೆ):-**

ಡಿಸೆಂಬರ್ 27 ರಿಂದ 31 ರವರೆಗೆ ಬೆಂಗಳೂರಿನಲ್ಲಿ 22 ನೇ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಯೋಜನೆ ಮತ್ತು ಐ.ಟಿ.ಬಿ.ಟಿ ಸಚಿವರದ ಎಸ್. ಆರ್ ಪಾಟೀಲ್ ಅವರು ತಿಳಿಸಿದರು.

ವಿಕಾಸಸೌಧದಲ್ಲಿ ಇಂದು ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ರಾಜ್ಯ ವಿಜ್ಞಾನ ಪರಿಷತ್ ವತಿಯಿಂದ ಕೆಂಗೇರಿ ಬಳಿಯ ಎಸ್.ಜೆ.ಬಿ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಸಮಾವೇಶವನ್ನು ಆಯೋಜಿಸಿದ್ದು, ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 27 ರಂದು ಸಮಾವೇಶವನ್ನು ಉದ್ಘಾಟಿಸಲಿದ್ದಾರೆಂದರು.

ದೇಶದ 36 ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ 850 ವಿದ್ಯಾರ್ಥಿಗಳು ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದು, ಹವಾಮಾನ, ವಾಯುಗುಣ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಯೋಜನೆಗಳನ್ನು ಮಂಡಿಸಲಿದ್ದು, ಅದರಲ್ಲಿ 45 ಅತ್ಯುತ್ತಮ ಯೋಜನೆಗಳನ್ನು ಗುರುತಿಸಿ ರಾಷ್ಟ್ರೀಯ ಪುರಸ್ಕಾರ ನೀಡಿ ಗೌರವಿಸಲಾಗುವುದೆಂದ ಸಚಿವರು, ಐದು ದಿನಗಳು ನಡೆಯುವ ಈ ವಿಜ್ಞಾನ ಸಮಾವೇಶದಲ್ಲಿ 10 ರಿಂದ 17 ವರ್ಷ ವಯಸ್ಸಿನ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಇವರ ಜೊತೆಗೆ 300 ಮಾರ್ಗದರ್ಶಿ ಶಿಕ್ಷಕರು 75 ಮಂದಿ ಮೌಲ್ಯ ಮಾಪಕರು ಪಾಲ್ಗೊಂಡು ವಿದ್ಯಾರ್ಥಿಗಳ ಯೋಜನೆಗಳನ್ನು ಪರಿಶೀಲನೆ ನಡೆಸಲಿದ್ದಾರೆ ಎಂದರು.

ಸಮಾವೇಶದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ದೇಶದ ಪ್ರಖ್ಯಾತ ವಿಜ್ಞಾನಿಗಳ ಜೊತೆ ಮುಖಾ ಮುಖಿ ಚರ್ಚೆ ಹಾಗೂ ವಿಡಿಯೋ ಸಂವಾದ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ರಾಷ್ಟ್ರೀಯ ಸಂಶೋಧನಾ ಪ್ರಧ್ಯಾಪಕರು ಹಾಗೂ ಭಾರತ ರತ್ನ ಪ್ರಶಸ್ತಿ ಪುರಸ್ಕೃತರಾದ ಪ್ರೊ॥ ಸಿ.ಎನ್.ಆರ್. ರಾವ್ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುವುದೆಂದು ಸಚಿವರು ತಿಳಿಸಿದರು.

ಐದು ದಿನಗಳು ನಡೆಯುವ ಈ ಸಮಾವೇಶದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಚಿವರುಗಳು ವಿಜ್ಞಾನಿಗಳು ಹಾಗೂ ಮತ್ತಿತರ ಗಣ್ಯರು ಹಾಜರಿರುತ್ತಾರೆಂದರು.

ಬೆಂಗಳೂರು ಹೊರತು ಪಡಿಸಿ ರಾಜ್ಯದ ದ್ವಿತೀಯ ಹಂತದ ಪಟ್ಟಣಗಳಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಮುಂದೆ ಬರುವ ಉದ್ಯಮಿಗಳಿಗೆ ಗುತ್ತಿಗೆ ಆಧಾರದಲ್ಲಿ ಉಚಿತವಾಗಿ ಭೂಮಿ ನೀಡಲು

ಸರ್ಕಾರ ಸಿದ್ದವಿದೆ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯದಲ್ಲಿ ಐ.ಟಿ ಉದ್ಯಮ ಪ್ರಾರಂಭಿಸವ ಆಸಕ್ತರನ್ನು ಆಕರ್ಷಿಸಲು ಮುಖ್ಯ ಮಂತ್ರಿ ಅವರು ಹಾಗೂ ನಾನು ಅಮೇರಿಕ ದೇಶಕ್ಕೆ ಪ್ರವಾಸ ಹೋಗಲು ಉದ್ದೇಶಿಸಿದ್ದು, ಈ ಸಂಬಂಧ ಪ್ರವಾಸದ ರೂಪು ರೇಷೆಗಳನ್ನು ಸಿದ್ದಪಡಿಸಲಾಗುತ್ತಿದೆ ಎಂದು ಪಾಟೀಲ್ ಅವರು ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿ ಹೇಳಿದರು.

**ಕೆ.ಪಿ.ಪು:ಬಿ.ಜಿ.ಪಿ:ಪಹೊ.**